ಕ್ರಮ ಸಂಖ್ಯೆ	ಜಿಲ್ಲೆಯ ಹೆಸರು	ಖಾಲಿ ಇರುವ ವೈದ್ಯರ ಹುದ್ದೆಗಳು
25	ಉಡುಪಿ	01
26	ಮೈಸೂರು	06
27	ಚಾಮರಾಜನಗರ	03
	ಒಟ್ಟು	108

ಗ್ರಾಮೀಣ ಗ್ರಂಥಾಲಯಗಳ ಮೇಲ್ವಿಚಾರಕರ ಸಂಭಾವನೆ ಹೆಚ್ಚಳ

4097 (4531) : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ವಯಸ್ಕರ ಶಿಕ್ಷಣ, ಗ್ರಂಥಾಲಯಗಳು, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗ್ರಾಮೀಣ ಗ್ರಂಥಾಲಯಗಳ ಮೇಲ್ವಿಚಾರಕರಾಗಿ ಸೇವೆ ಸಲ್ಲಿಸುತ್ತಿರುವ ನೌಕರರಿಗೆ ನೀಡುತ್ತಿರುವ ಸಂಭಾವನೆ ಎಷ್ಟು?

ಆ) ಅವರ ಸಂಭಾವನೆಯನ್ನು ಏರಿಸಲು ಕ್ರಮಕೈಗೊಳ್ಳಲಾಗುವುದೇ?

ಇ) ಹಾಗಿದ್ದಲ್ಲಿ ಯಾವ ಕ್ರಮವನ್ನು ಕೈಗೊಳ್ಳಲಾಗುವುದು?

ಶ್ರೀ ಬಾಬುರಾವ್ ಚವ್ಹಾಣ್ (ವಯಸ್ಕರ ಶಿಕ್ಷಣ, ಗ್ರಂಥಾಲಯಗಳು, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು):

ಅ) ರೂ. 750.00 ಮಾಸಿಕ ಗೌರವ ಸಂಭಾವನೆಯನ್ನು ನೀಡಲಾಗುತ್ತಿದೆ.

ಆ) ಸಂಭಾವನೆ ಹೆಚ್ಚಿಸುವ ಬಗ್ಗೆ ಸರ್ಕಾರದ ಆರ್ಥಿಕ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಪರಿಶೀಲನೆ ನಡೆಯುತ್ತಿದೆ.

ಇ) ಮೇಲಿನ ಉತ್ತರದಿಂದ ಉದ್ಭವಿಸುವುದಿಲ್ಲ.

ತುರುವೇಕೆರೆ–ಹುಲ್ಲೇಕೆರೆ ರಸ್ತೆಯನ್ನು ಮೇಲ್ದರ್ಜೆಗೆ ಏರಿಸುವುದು

4101 (4504) : ಶ್ರೀ ಲಕ್ಷ್ಮಿನಾರಾಯಣ ಎಂ.ಡಿ (ಅಣ್ಣಯ್ಯ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುರುವೇಕೆರೆ–ಹುಲ್ಲೇಕೆರೆ ರಸ್ತೆಯನ್ನು ಮೇಲ್ದರ್ಜೆಗೆ ಏರಿಸಲು ಪ್ರಸ್ತಾವನೆ ಸಲ್ಲಿಸಿದ್ದು ಯಾವಾಗ?

ಆ) ಲೋಕೋಪಯೋಗಿ ಇಲಾಖೆಯಿಂದ ಈ ವಿಷಯದಲ್ಲಿ ಮಾಹಿತಿ ಕೇಳಿಬಂದ ಕಡತವನ್ನು ಇದುವರೆವಿಗೂ ಸರ್ಕಾರದಲ್ಲಿ ಬಾಕಿ ಇರುವುದು ನಿಜವೇ?

ಇ) ಈ ರಸ್ತೆಯ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ?

ಈ) ತಕ್ಷಣ ಈ ರಸ್ತೆಯನ್ನು ಮೇಲ್ದರ್ಜೆಗೆ ಏರಿಸಲು ಪ್ರಸ್ತಾವನೆ ಮಂಜೂರು ಮಾಡಲಾಗುವುದೇ?

ಉ) ಯಾವಾಗ ಮಾಡಲಾಗುವುದು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು):

ಅ) ಗ್ರಾಮೀಣ ರಸ್ತೆಗಳನ್ನು ಜಿಲ್ಲಾ ಮುಖ್ಯ ರಸ್ತೆಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಅ) ನಿಜ.

ಇ) ಈ ರಸ್ತೆಯನ್ನು ಮೇಲ್ದರ್ಜೆಗೇರಿಸುವುದರ ಅವಶ್ಯಕತೆಯನ್ನು ಸರ್ಕಾರ ಮನಗಂಡಿದೆ.

ಈ) ಒಂದೊಂದೇ ರಸ್ತೆಯನ್ನು ಮೇಲ್ದರ್ಜೆಗೇರಿಸಲಾಗದು. ಒಟ್ಟಾರೆ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಉ) ನಿರ್ಧಾರ ತೆಗೆದುಕೊಳ್ಳುವ ಹಂತದಲ್ಲಿದೆ.

ತುರುವೇಕೆರೆ ತಾಲ್ಲೂಕು ಸಂಪಿಗೆ ಆರೋಗ್ಯ ತಪಾಸಣಾ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದು

4102 (4505) : ಶ್ರೀ ಲಕ್ಷ್ಮಿನಾರಾಯಣ ಎಂ.ಡಿ (ತುರುವೇಕೆರೆ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕು ದಂಡಿನಶಿವರ ಹೋಬಳಿ ಸಂಪಿಗೆ ಆರೋಗ್ಯ ತಪಾಸಣಾ ಆಸ್ಪತ್ರೆಗೆ ಜನಸಂದಣಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಆಸ್ಪತ್ರೆಯನ್ನು ಮೇಲ್ದರ್ಜೆಗೆ ಏರಿಸಲು ಸರ್ಕಾರ ವಿಳಂಬ ಮಾಡಲು ಕಾರಣವೇನು;

ಇ) ಈ ಭಾಗದಲ್ಲಿ ಇರುವ ಆಸ್ಪತ್ರೆಯ ಸೇವೆ ಬಹಳ ಅವಶ್ಯಕವಾಗಿರುವಾಗ ತಕ್ಷಣ ಮೇಲ್ದರ್ಜೆಗೆ ಏರಿಸಲಾಗುವುದೇ;

ಈ) ಈ ವರ್ಷ ಮಾಡಲಾಗುವುದೇ.

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಸಂಪಿಗೆಯಲ್ಲಿ ಪ್ರಾಥಮಿಕ ಆರೋಗ್ಯ ಘಟಕ ಇದ್ದು ದಂಡಿನ ಶಿವಾರ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಸೇರಿದ್ದು ದಿನ ಒಂದಕ್ಕೆ 30 ರಿಂದ 35 ಹೊರ ರೋಗಿಗಳನ್ನು ನೋಡಲಾಗುತ್ತಿದೆ. ತುರುವೇಕೆರೆ ತಾಲ್ಲೂಕಿನ ಜನರ ಸಂಖ್ಯೆ 1,73,615 ಇದ್ದು 9 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು 3 ಪ್ರಾಥಮಿಕ ಆರೋಗ್ಯ ಘಟಕಗಳು ಕೆಲಸ ನಿರ್ವಹಿಸುತ್ತಿದ್ದು ಅವಶ್ಯಕತೆಗಿಂತ ಹೆಚ್ಚಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳಿರುತ್ತವೆ. ಮೇಲ್ದರ್ಜೆಗೇರಿಸುವ ಪ್ರಸ್ತಾಪವಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ತುರುವೇಕೆರೆ ನಗರದಲ್ಲಿ ಶಾಲಾ ಕೊಠಡಿ ಕೊರತೆ

4103 (4506) : ಶ್ರೀ ಲಕ್ಷ್ಮಿನಾರಾಯಣ ಎಂ.ಡಿ. (ಅಣ್ಣಯ್ಯ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುರುವೇಕೆರೆ ನಗರದಲ್ಲಿರುವ ಸರ್ಕಾರಿ ಜೂನಿಯರ್ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳ ಸಂಖ್ಯೆ ಎಷ್ಟು;

ಆ) ಹಾಗಿದ್ದಲ್ಲಿ, ಶಾಲೆಯಲ್ಲಿ ಇರುವ ಕೊಠಡಿಗಳು ಸಾಕಾಗುತ್ತಿವೆಯೇ;

ಇ) ಮಕ್ಕಳು ಮರದ ಕೆಳಗೆ ವ್ಯಾಸಂಗ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಇದುವರೆವಿಗೂ ಶಾಲೆಯ ಅಭಿವೃದ್ಧಿ ಹಾಗೂ ಶಾಲೆಗೆ ಅವಶ್ಯಕತೆಯಿರುವ ಕೊಠಡಿಗಳನ್ನು ಮಂಜೂರು ಮಾಡುವುದೇ;